# ಕರ್ನಾಟಕ ವಿಧಾನ ಪರಿಷತ್ತು
## ನೂರ ಮೂವತ್ತಮೂರನೆಯ ಅಧಿವೇಶನ
## (ಮುಂದುವರೆದ ಉಪವೇಶನಗಳು)

**ಕಾರ್ಯಕಲಾಪಗಳ ಪಟ್ಟಿ**

**ಬುಧವಾರ, ದಿನಾಂಕ: 14ನೇ ಜೂನ್, 2017**
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

******

**01. ಪ್ರಶ್ನೋತ್ತರ**

| | | | |
|---|---|---|---|
| ಅ. | ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : | ಇಪ್ಪತ್ತೊಂದನೆಯ ಪಟ್ಟಿ |
| ಆ. | **ತಡೆಹಿಡಿಯಲಾದ ಪ್ರಶ್ನೆಗಳು:** | | |
| | 1) ಹದಿನಾರನೆಯ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ರಮೇಶ್ ಬಾಬು ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 232(2253) | : | **ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು** |
| | 2) ಹದಿನಾರನೆಯ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಅಮರನಾಥ ಪಾಟೀಲ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 233(2289) | : | **ಮಾನ್ಯ ಕಂದಾಯ ಸಚಿವರು** |
| | 3) ಹದಿನಾರನೆಯ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಹೆಚ್. ಎಂ. ರೇವಣ್ಣ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 239(2199) | : | **ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು** |
| ಇ. | ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : | ಇಪ್ಪತ್ತೊಂದನೆಯ ಪಟ್ಟಿ |

**02. ವಿತ್ತೀಯ ಕಾರ್ಯಕಲಾಪ**

**ಪೂರಕ ಅಂದಾಜುಗಳನ್ನೊಪ್ಪಿಸುವುದು**

**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು)** ಅವರು :-

ಭಾರತ ಸಂವಿಧಾನದ 205(1)(ಎ) ನೆಯ ಅನುಚ್ಛೇದದ ಮೇರೆಗೆ 2017-18ನೇ ಸಾಲಿನ ಪೂರಕ ಅಂದಾಜುಗಳನ್ನು (ಮೊದಲನೇ ಕಂತು) ಒಪ್ಪಿಸುವುದು.

. . 2

**೦3. ವರದಿಗಳನ್ನೊಪ್ಪಿಸುವುದು**

**ಶ್ರೀ ಎನ್.ಎಸ್. ಬೋಸ್‌ರಾಜ್** ಅವರು (ಅಧ್ಯಕ್ಷರು, ಕರ್ನಾಟಕ ವಿಧಾನ ಪರಿಷತ್ತಿನ ಹಕ್ಕುಬಾಧ್ಯತಾ ಸಮಿತಿ) 2016-17ನೇ ಸಾಲಿನ ಕರ್ನಾಟಕ ವಿಧಾನ ಪರಿಷತ್ತಿನ ಹಕ್ಕುಬಾಧ್ಯತಾ ಸಮಿತಿಯ 83 ಹಾಗೂ 84ನೇ ವರದಿಗಳನ್ನು ಒಪ್ಪಿಸುವುದು.

**೦4. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯ**

**ಶ್ರೀ ಕೆ.ಎಸ್. ಈಶ್ವರಪ್ಪ, ವಿಧಾನ ಪರಿಷತ್ತಿನ ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಇತರರುಗಳಿಂದ** ರಾಜ್ಯದಲ್ಲಿ ಸತತ ಬರಗಾಲದಿಂದ ಉಂಟಾಗಿರುವ ಪರಿಸ್ಥಿತಿಯ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ.

**೦5. ಗಮನ ಸೆಳೆಯುವ ಸೂಚನೆಗಳು**

**ಅ) ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ರಾಜ್ಯಾದ್ಯಂತ ಲಕ್ಷಾಂತರ ಹೊಲಿಗೆ ವೃತ್ತಿ ಬಾಂಧವರಿಗೆ ಈಗಾಗಲೇ ಜಾರಿಯಲ್ಲಿರುವ 'ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ' ಮುಖಾಂತರ ಜಾರಿಯಲ್ಲಿರುವ ಭವಿಷ್ಯನಿಧಿ, ಪಿಂಚಣಿ ಮತ್ತು ಎನ್.ಪಿ.ಎಸ್. ಲೈಫ್ ಯೋಜನೆಯನ್ನು ಜಾರಿಗೊಳಿಸುವ ಬಗ್ಗೆ **ಮಾನ್ಯ ಕಾರ್ಮಿಕ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀಯುತರುಗಳಾದ: ಕೋಟ ಶ್ರೀನಿವಾಸ ಪೂಜಾರಿ, ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಎಂ.ಕೆ. ಪ್ರಾಣೇಶ್, ಭಾನುಪ್ರಕಾಶ್, ಆರ್. ಪ್ರಸನ್ನಕುಮಾರ್ ಹಾಗೂ ಇತರರುಗಳು** ಗ್ರಾಮ ಪಂಚಾಯತಿಗಳಲ್ಲಿನ ತೆರಿಗೆ ಬಾಕಿ, ಬಾಪೂಜಿ ಸೇವಾ ಕೇಂದ್ರಗಳನ್ನು ಶಕ್ತಿಯುತಗೊಳಿಸುವುದು, ಸಿಬ್ಬಂದಿಗಳ ವೇತನ ಹಾಗೂ ಪಿ.ಡಿ.ಓ.ಗಳ ಹುದ್ದೆಗಳನ್ನು ಮೇಲ್ದರ್ಜೆಗೇರಿಸುವುದು ಇತ್ಯಾದಿ ವಿಷಯಗಳ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ** ಗಮನ ಸೆಳೆಯುವುದು.

**ಇ) ಶ್ರೀ ವಿ.ಎಸ್.ಉಗ್ರಪ್ಪ** ಅವರು ಸರ್ಕಾರದ ಹಾಗೂ ಖಾಸಗಿಯವರಿಂದ ನಡೆಯುತ್ತಿರುವ ಘನತ್ಯಾಜ್ಯ ಸಂಸ್ಕರಣಾ ಘಟಕಗಳು ಹಾಗೂ ಅವುಗಳು ಸಂಸ್ಕರಣೆ ಮಾಡುತ್ತಿರುವ ಘನತ್ಯಾಜ್ಯದ ಪ್ರಮಾಣ ಹಾಗೂ ವಿಲೇವಾರಿಗಾಗಿ ಮೀಸಲಿಟ್ಟಿರುವ ಹಣದ ಕುರಿತು **ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರ** ಗಮನ ಸೆಳೆಯುವುದು.

**೦6. ವಿಧಾನ ಮಂಡಲದ ಸಮಿತಿಯ ವರದಿಯ ಮೇಲೆ ಚರ್ಚೆ**

**ಶ್ರೀಯುತರುಗಳಾದ: ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ), ಕೆ.ಸಿ. ಕೊಂಡಯ್ಯ ಹಾಗೂ ಅಲ್ಲಂ ವೀರಭದ್ರಪ್ಪ** ಅವರುಗಳು ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ 2014-15ನೇ ಸಾಲಿನ ಮೂರನೇ ವರದಿಯಲ್ಲಿನ ಶಿಫಾರಸ್ಸುಗಳು ಹಾಗೂ ಅವುಗಳ ಮೇಲೆ ಸರ್ಕಾರ ಕೈಗೊಂಡಿರುವ ಅನುಸರಣಾ ವರದಿಯ ಬಗ್ಗೆ ಪ್ರಸ್ತಾಪಿಸುವುದು ಹಾಗೂ ಸರ್ಕಾರದಿಂದ ಉತ್ತರ.

**ಶ್ರೀನಿವಾಸ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
www.kla.kar.nic.in/council.htm